# ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ
# ಸುತ್ತೂರು ಶ್ರೀಕ್ಷೇತ್ರ, ಮೈಸೂರು ಜಿಲ್ಲೆ

## ಸುತ್ತೂರು ಶ್ರೀಕ್ಷೇತ್ರದಲ್ಲಿ ರಾಜೇಂದ್ರ ಶ್ರೀಗಳ ಜಯಂತಿಯಂದು ಶಿವದೀಕ್ಷಾ ಸಂಸ್ಕಾರ

**ಸುತ್ತೂರು: ಆ-29:** ಆಗಸ್ಟ್ 29ರಂದು ಮಾಸ ಶಿವರಾತ್ರಿಯಂದು ಪರಮಪೂಜ್ಯ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 104ನೆಯ ಜಯಂತಿಯ ಶುಭಸಂದರ್ಭದಲ್ಲಿ ಮೈಸೂರಿನ ಸರ್ದಾರ್ ವಲ್ಲಭಬಾಯಿ ಪಟೇಲ್ ನಗರದಲ್ಲಿ ಶ್ರೀ ಶಿವರಾತ್ರಿ ರಾಜೇಂದ್ರ ಸೇವಾಟ್ರಸ್ಟ್‌ನವರು ನಡೆಸುತ್ತಿರುವ ರಾವ್ ಬಹದ್ದೂರ್ ಧರ್ಮಪ್ರವರ್ತ ಗುಬ್ಬಿ ತೋಟದಪ್ಪ ಉಚಿತ ವಿದ್ಯಾರ್ಥಿನಿಲಯದ ಸುಮಾರು 35 ವಿದ್ಯಾರ್ಥಿಗಳಿಗೆ ಶ್ರೀ ಶಿವರಾತ್ರೀಶ್ವರ ಕರ್ತೃ ಗದ್ದುಗೆಯ ಪ್ರಾಂಗಣದಲ್ಲಿ ಶಿವದೀಕ್ಷಾ ಸಂಸ್ಕಾರವನ್ನು ನೀಡಲಾಯಿತು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ವಸ್ತ್ರ, ಕರಡಿಗೆ, ಪುಸ್ತಕಗಳನ್ನು ನೀಡಲಾಯಿತು.

ಶಿವದೀಕ್ಷಾ ಸಂಸ್ಕಾರವನ್ನು ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ನೆರವೇರಿಸಲಾಯಿತು. ವಿದ್ಯಾರ್ಥಿನಿಲಯದ ಟ್ರಸ್ಟಿಗಳಾದ ಶ್ರೀ ದುಗ್ಗಹಟ್ಟಿ ವಿ. ಮಲ್ಲಿಕಾರ್ಜುನಸ್ವಾಮಿ, ಶ್ರೀ ಅಕ್ಷಯ್ ಮಲ್ಲಪ್ಪ, ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿಗಳಾದ ಶ್ರೀ ಎಸ್.ಪಿ.ಮಂಜುನಾಥ್, ಶ್ರೀ ಎಸ್.ಶಿವಕುಮಾರಸ್ವಾಮಿ, ದುಗ್ಗಹಟ್ಟಿ ಶ್ರೀ ಪಿ.ವೀರಭದ್ರಪ್ಪ, ನಿಲಯಪಾಲಕರಾದ ಕೆ.ಬಿ. ಆನಂದಮೂರ್ತಿ ಇತರರು ಉಪಸ್ಥಿತರಿದ್ದರು.



ಸುತ್ತೂರು ಶ್ರೀಕ್ಷೇತ್ರದಲ್ಲಿ ಆಗಸ್ಟ್ 29ರಂದು ಪರಮಪೂಜ್ಯ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 104ನೆಯ ಜಯಂತಿ ಶುಭಸಂದರ್ಭದಲ್ಲಿ ಮೈಸೂರಿನ ಸರ್ದಾರ್ ವಲ್ಲಭಭಾಯಿ ಪಟೇಲ್ ನಗರದಲ್ಲಿ ಶ್ರೀ ಶಿವರಾತ್ರಿ ರಾಜೇಂದ್ರ ಸೇವಾ ಟ್ರಸ್ಟ್‌ನವರು ನಡೆಸುತ್ತಿರುವ ರಾವ್ ಬಹದ್ದೂರು ಧರ್ಮಪ್ರವರ್ತ ಗುಬ್ಬಿ ತೋಟದಪ್ಪ ಉಚಿತ ವಿದ್ಯಾರ್ಥಿನಿಲಯದ ಸುಮಾರು 35 ವಿದ್ಯಾರ್ಥಿಗಳಿಗೆ ಶಿವದೀಕ್ಷಾ ಸಂಸ್ಕಾರ ನೀಡಿದ ಸಂದರ್ಭ. ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಸಂಘದ ಪದಾಧಿಕಾರಿಗಳು ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.